**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ನೋಡೆಲ್ ಅಧಿಕಾರಿಗಳು/ಸಹಾಯಕ ಅಭಿಯಂತರರ ಕಛೇರಿ ನಾಗಪುರ ಉಪವಿಭಾಗ, ಬಿ.ಬಿ.ಎಂ.ಪಿ,
12ನೇ ಮುಖ್ಯರಸ್ತೆ, 11ನೇ ಕ್ರಾಸ್, ನಾಗಪುರ, ಬಿಬಿಎಂಪಿ ಕಛೇರಿ ಸಂಕೀರ್ಣ ಕಟ್ಟಡ, ಮಹಾಲಕ್ಷ್ಮೀಲೇಔಟ್,ಬೆಂಗಳೂರು-86,

# ದಿನಾಂಕ:-01-04-2022 ರಂದು ನಡೆದ ವಾರ್ಡ್ ಸಂಖ್ಯೆ:67ರ ವಾರ್ಡ್ ಸಮಿತಿ ಸಭೆಯ ನಡವಳಿ

ಉಲ್ಲೇಖ:- (1) ಸಮಿತಿ ಸಭೆ ಸೂಚಿ ಪತ್ರ ಸಂಖ್ಯೆ:ಬಿ12(5)/ಪಿಆರ್/35/2020-21 ದಿನಾಂಕ:21:09:2020
(2)ಸಭೆ ಸೂಚನಾ ಪತ್ರ ಸಂ. ಸ.ಅ./ವಾ-67/ಪಿ.ಆರ್/39/2021-22 ದಿನಾಂಕ:31-03-2022

| ಕ್ರ.ಸ. | ಶ್ರೀಯುತರ ಹೆಸರು | ಹುದ್ದೆ |
|---|---|---|
| 1. | ಶ್ರೀ. ವಿಶ್ವನಾಥ್ | ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ನೋಡೆಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಂಖ್ಯೆ:67 |
| 2. | ಶ್ರೀ. ಬಿ. ಸಿ ರವಿಕುಮಾರ್ | ಸಹಾಯಕ ಅಭಿಯಂತರು ವಾರ್ಡ-67 ಹಾಗು ಸಮಿತಿ ಕಾರ್ಯದರ್ಶಿಗಳು |
| 3. | ಶ್ರೀ. ಉದಯ ಶಂಕರ್ | 1ನೇ 'ಆರ್'ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು. |
| 4. | ಶ್ರೀ. ರಾಮಚಂದ್ರ | 1ನೇ 'ಎನ್'ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು. |
| 5. | ಶ್ರೀ. ರಂಗರಾಜು | 1ನೇ 'ಎನ್'ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘ. |
| 6. | ಶ್ರೀ. ರಾಮನಾಥ್ | 1ನೇ 'ಎನ್'ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘ. |
| 7. | ಶ್ರೀ. ಸತೀಶ್ ಆರ್ | ವಾರ್ಡ್‌ನ ನಾಗರೀಕರು. |
| 8. | ಶ್ರೀಮತಿ. ಗೀತಾ ಕಿನಾಲ್ | ವಾರ್ಡ್ ಸಮಿತಿ ಸದಸ್ಯರು. |
| 9. | ಶ್ರೀ.ಆನಂದ್ ಮೂರ್ತಿ | ಸಹಾಯಕ ಅಭಿಯಂತರರು, ಬೆಸ್ಕಂ ಎನ್ 1 ಉಪವಿಭಾಗ. |
| 10. | ಶ್ರೀ. ನಾಗರಾಜು | ಸಹಾಯಕ ಅಭಿಯಂತರರು, ಬೆಂ.ಜ.ಮಂ. ಎನ್.ಡ.ಬ್ಲೂ-1 |
| 11. | ಶ್ರೀ. ಗಂಗಯ್ಯ | ಹಿರಿಯ ಆರೋಗ್ಯ ಪರೀವಿಕ್ಷಕರು, ವಾರ್ಡ್-67. |
| 12. | ಶ್ರೀ. ಮಂಜುನಾಥ್ | ತೋಟಗಾರಿಕೆ ಇಲಾಖೆ ಮೇಸ್ತ್ರಿ, ಪಶ್ಚಿಮ ವಲಯ. |
| 13. | ಶ್ರೀ. ಮಹೇಂದ್ರ ಗೌಡ | ಬೀದಿ ದೀಪ ಗುತ್ತಿಗೆದಾರರ ಸಿಬ್ಬಂದಿ. |
| 14. | ಶ್ರೀ. ಪವನ್ ಕುಮಾರ್. | ಕಿರಿಯ ಅಭಿಯಂತರರು, ಬೆಂ.ಜ.ಮಂ. ಎನ್.ಡಬ್ಲೂ-1 |
| 15. | ಶ್ರೀ. ಛಾಯಾಪತಿ (ಪ್ರಭಾರ ವಾರ್ಡ್-44) | ಕಿರಿಯ ಆರೋಗ್ಯ ಪರೀವಿಕ್ಷರು, ವಾರ್ಡ್-67 |
| 16. | ಶ್ರೀ. ಮುನಿಸ್ವಾಮಯ್ಯ | ಎ.ಎಸ್.ಐ ಮಲ್ಲೇಶ್ವರಂ ಪೋಲೀಸ್ ಠಾಣೆ (ಸಂಚಾರಿ) |



ಪು.ತಿ.ನೋ.

Scanned by CamScanner

| | | |
|---|---|---|
| 17. | ಶ್ರೀ. ಮಲ್ಲಯ್ಯ | ಅರಣ್ಯ ಇಲಾಖೆ, ಮೇಸ್ತ್ರಿ |
| 18. | ಶ್ರೀ. ರಮೇಶ್ ಎಸ್ ಟಿ | ಪಶು ಕೆಲಸ ವಿಭಾಗ. |
| 19. | ಸುಬ್ರಮಣ್ಯನಗರ ಪೊಲೀಸ್ ಠಾಣೆ. | ಗೈರು ಹಾಜರಿ |
| 20. | ಮಹಾಲಕ್ಷ್ಮೀಲೇಔಟ್ ಪೊಲೀಸ್ ಠಾಣೆ | ಗೈರು ಹಾಜರಿ |
| 21. | ರಾಜಾಜಿನಗರ ಪೊಲೀಸ್ ಠಾಣೆ | ಗೈರು ಹಾಜರಿ |
| 22. | ಸಹಾಯಕ ಅಭಿಯಂತರರು ಬೆಂ.ಜ.ಮಂ ಎನ್.ಡಬ್ಲ್ಯೂ-2 | ಗೈರು ಹಾಜರಿ |
| 23. | ಸಹಾಯಕ ಅಭಿಯಂತರರು, ಬೆಸ್ಕಾಂ ಎನ್ 7 ಉಪವಿಭಾಗ. | ಗೈರು ಹಾಜರಿ |

ವಾರ್ಡ್ ಸಮಿತಿ ಸಭೆಯ ಕಾರ್ಯದರ್ಶಿಗಳು ಮಾತನಾಡಿ ಮಾರ್ಚ್ ಮಾಹೆಯ ದಿ:01/04/2022 ರಂದು ಬೆಳಿಗ್ಗೆ 9.30 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಅಭಿವೃದ್ಧಿ ಹಾಗೂ ಕುಂದುಕೊರತೆಗಳ ಬಗ್ಗೆ ಚರ್ಚಿಸಲು ಕರೆದಿರುವ ಸಭೆಗೆ ಆಗಮಿಸಿರುವ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮತ್ತು ಸಮಿತಿ ಸದಸ್ಯರಿಗೆ ಸ್ವಾಗತ ಕೋರಿದರು. ಹಾಗೂ ವಾರ್ಡ್ ಸಂಖ್ಯೆ67ರ ವಾಸ್ತವದ ಬಗ್ಗೆ ಕಿರು ಪರಿಚಯವನ್ನು ಮಂಡಿಸಿದರು.

ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮಾತನಾಡಿ ಸಮಿತಿಯ ಸದಸ್ಯರು ಮತ್ತು ಸ್ಥಳೀಯ ಸಾರ್ವಜನಿಕರು ತಮ್ಮ ತಮ್ಮ ಅವಹಾಲುಗಳನ್ನು ತಿಳಿಸಬೇಕೆಂದು ತಿಳಿಸಿದ ಹಿನ್ನೆಲೆಯಲ್ಲಿ ಸಮಿತಿಯ ಸದಸ್ಯರು ಈ ಕೆಳಕಂಡಂತೆ ವಾರ್ಡ್‌ನಲ್ಲಿ ಕಂಡುಬಂದಿರುವ ಸಮಸ್ಯೆಗಳನ್ನು ಸಭೆಗೆ ಮಂಡಿಸಿದರು.

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:

| | |
|---|---|
| ಶ್ರೀ.ಉದಯ ಶಂಕರ್<br>1ನೇ 'ಆರ್'ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು. | ವಾರ್ಡ್‌ನ ರಾಜಾಜಿನಗರ 1ನೇ ಆರ್ ಬ್ಲಾಕ್‌ನಲ್ಲಿ 20ನೇ 'ಎ' ಮೈನ್‌ನ ನಂದಿನಿ ಬೂತ್ ಹತ್ತಿರ ಆರ್.ಸಿ.ಸಿ ಚರಂಡಿ ಇರುವುದಿಲ್ಲ ಹೊಸದಾಗಿ ಚರಂಡಿ ನಿರ್ಮಿಸುವುದಾಗಿ ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್<br>ಸಹಾಯಕ ಅಭಿಯಂತರು<br>ವಾರ್ಡ್-67 | ವಾರ್ಡ್‌ನ ಸಮಿತಿ ಸದಸ್ಯರ ದೂರಿನಂತೆ ಈಗಾಗಲೆ ಸ್ಥಳ ಪರಿಶೀಲಿಸಲಾಗಿದ್ದು ಹೊಸ ಆರ್.ಸಿ.ಸಿ ಚರಂಡಿ ನಿರ್ಮಿಸಲಾಗುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ಮಾನ್ಯ ನೋಡಲ್ ಅಧಿಕಾರಿಯವರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಮಾತನಾಡುತ್ತಾ ವಾರ್ಡ್-67 ನಾಗಪುರದಲ್ಲಿ ಕೋವಿಡ್-19ಗೆ ಸಂಭಂಧಿಸಿದಂತೆ ಮಾಹಿತಿಗಳ ವಿವರಣೆ ನೀಡುವಂತೆ ಶ್ರೀ, ಗಂಗಯ್ಯ, ಹಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸಭೆಯಲ್ಲಿ ಸೂಚಿಸಿದರು. |
| ಶ್ರೀ. ಗಂಗಯ್ಯ<br>ಹಿರಿಯ ಆರೋಗ್ಯ ಪರೀವಿಕ್ಷಕರು,<br>ವಾರ್ಡ್-67 | ಶ್ರೀ, ಗಂಗಯ್ಯ, ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ಕಳೆದ 15 ದಿನಗಳಿಂದ ಇತ್ತೀಚಿನ ದಿನಗಳಲ್ಲಿ ಯಾವುದೇ ಹೊಸ ಪ್ರಕರಣಗಳು ಕಂಡುಬಂದಿರುವುದಿಲ್ಲ ಮತ್ತು ಯಾವುದೇ ಡೆತ್ ಕೇಸ್‌ಗಳು ಕಂಡುಬಂದಿರುವುದಿಲ್ಲ ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ. ರಾಮಚಂದ್ರ<br>1ನೇ 'ಎನ್'ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು. | ವಾರ್ಡ್‌ನ ರಾಜಾಜಿನಗರ 'ಎನ್' ಬ್ಲಾಕ್‌ನಲ್ಲಿ ಒಣಗಿರುವ ಮರಗಳ ರೆಂಬೆಗಳ ಟ್ರೀಮಿಂಗ್ ಮಾಡಬೇಕು ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |



ಪು.ತಿ.ನೋ.

Scanned by CamScanner

| | |
|---|---|
| ಶ್ರೀ. ಸತೀಶ್<br>ವಾರ್ಡ್‌ನ ನಾಗರೀಕರು. | ವಾರ್ಡ್‌ನ ನಾಗಪುರ ಮುಖ್ಯರಸ್ತೆಯಲ್ಲಿ ಒಣಗಿರುವ ಮರಗಳ ರಂಬೆ ಟ್ರೀಮಿಂಗ್ ಮಾಡಬೇಕು ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀಮತಿ. ಗೀತಾ ಕಿನಾಲ್<br>ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ ರಾಜಾಜಿನಗರ 1ನೇ ಬ್ಲಾಕ್‌ನ ಉದಯಕುಮಾರ್ ಉದ್ಯಾನದ ಹತ್ತಿರ ಮರಗಳ ರಂಬೆ ಟ್ರೀಮಿಂಗ್ ಮಾಡಬೇಕು ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಮಲ್ಲಯ್ಯ<br>ಅರಣ್ಯ ಇಲಾಖೆ, ಮೇಸ್ತ್ರಿ | ವಾರ್ಡ್‌ನ ಸಮಿತಿ ಸದಸ್ಯರ ಹಾಗು ವಾರ್ಡ್‌ನ ನಾಗರೀಕರ ದೂರಿಗೆ ಸಂಭಂದಿಸಿದಂತೆ ಮರಗಳ ರೆಂಬೆಗಳನ್ನು ಟ್ರೀಮಿಂಗ್ ಮಾಡಲಾಗುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ರಾಮಚಂದ್ರ<br>1ನೇ 'ಎನ್'ಬ್ಲಾಕ್ ಕ್ಷೇಮಾಭಿವೃದ್ಧಿ<br>ಸಂಘದ ಅಧ್ಯಕ್ಷರು. | ವಾರ್ಡ್‌ನ 5ನೇ ಹಾಗು 8ನೇ ಅಡ್ಡರಸ್ತೆ ಜಂಕ್ಷನ್‌ನಲ್ಲಿ ಕುಡಿಯುವ ನೀರಿನ ಮೈನ್ ಪೈಪ್‌ಲೈನ್ ದುರಸ್ಥಿಯಾಗಿದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಪವನ್ ಕುಮಾರ್.<br>ಕಿರಿಯ ಅಭಿಯಂತರರು,<br>ಬೆಂ.ಜ.ಮಂ. ಎನ್.ಡಬ್ಲ್ಯೂ-1 | ವಾರ್ಡ್‌ನ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ಈಗಾಗಲೆ ಕುಡಿಯುವ ನೀರಿನ ಪೈಪ್‌ಲೈನ್‌ಅನ್ನು ಸರಿಪಡಿಸಲಾಗಿದೆ ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ. ರಂಗರಾಜು<br>1ನೇ 'ಎನ್'ಬ್ಲಾಕ್ ಕ್ಷೇಮಾಭಿವೃದ್ಧಿ<br>ಸಂಘ | ವಾರ್ಡ್‌ನ ರಾಜಾಜಿನಗರ 1ನೇ ಬ್ಲಾಕ್ ಹತ್ತಿರ 1 ಅಬಾಂಡೆಡ್ ವಾಹನವಿದ್ದು ಅದನ್ನು ಇನ್ನು ತೆರವುಗೊಳಿಸಿರುವಿದಿಲ್ಲವೆಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್<br>ಸಹಾಯಕ ಅಭಿಯಂತರು<br>ವಾರ್ಡ್-67 | ವಾರ್ಡ್‌ನಲ್ಲಿ ಮಲ್ಲೇಶ್ವರಂ ಸಂಚಾರಿ ಪೋಲೀಸ್ ಠಾಣೆರವರು ನೀಡಿರುವಂತೆ 6 ವಾಹನಗಳಿಗೆ ನೋಟಿಸ್ ಅಂಟಿಸಲಾಗಿದೆ ಮುಂದುವರೆದು ನೀಡಿರುವ ಪಟ್ಟಿಯಂತೆ ಇಬ್ಬರ ಸಮುಖದಲ್ಲಿ ನೋಟಿಸ್ ನೀಡಲಾಗುವುದಾಗಿ ಮಾಹಿತಿ ಒದಗಿಸಿದರು, ಹಾಗು ಮುಖ್ಯ ಆಯುಕ್ತರ ಆದೇಶದಂತೆ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ. ರಾಮನಾಥ್<br>1ನೇ 'ಎನ್'ಬ್ಲಾಕ್ ಕ್ಷೇಮಾಭಿವೃದ್ಧಿ<br>ಸಂಘ | ವಾರ್ಡ್‌ನ ರಾಜಾಜಿನಗರ 1ನೇ ಬ್ಲಾಕ್ ಹರೇ ಕೃಷ್ಣ ಉದ್ಯಾನದ ಹತ್ತಿರ ನೂತನ ರೀಟೈನಿಂಗ್ ವಾಲ್ ಕಾಮಗಾರಿಯು ತಾತ್ಕಾಲಿಕವಾಗಿ ನಿಂತಿರುತ್ತದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು ಹಾಗು ಕಾಮಗಾರಿ ನಿಂತಿರುವುದಕ್ಕೆ ಕಾರಣ ಕೇಳಿದರು. |
| ಶ್ರೀ. ಬಿ. ಸಿ ರವಿಕುಮಾರ್<br>ಸಹಾಯಕ ಅಭಿಯಂತರು<br>ವಾರ್ಡ್-67 | ವಾರ್ಡ್‌ನ ರಾಜಾಜಿನಗರ 1ನೇ ಬ್ಲಾಕ್ ಹರೇ ಕೃಷ್ಣ ಉದ್ಯಾನದ ಹತ್ತಿರ ನೂತನ ರೀಟೈನಿಂಗ್ ವಾಲ್ ಕಾಮಗಾರಿಯು ನಡೆಯುತ್ತಿದ್ದು ಮಾನ್ಯ ಸಚಿವರ ನಿರ್ದೇಶನದಂತೆ ತಾತ್ಕಾಲಿಕವಾಗಿ ಕಾಮಗಾರಿಯನ್ನು ನಿಲ್ಲಿಸಲಾಗಿದೆ ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ. ರಾಮನಾಥ್<br>1ನೇ 'ಎನ್'ಬ್ಲಾಕ್ ಕ್ಷೇಮಾಭಿವೃದ್ಧಿ<br>ಸಂಘ | ವಾರ್ಡ್‌ನ ರಾಜಾಜಿನಗರ 1ನೇ ಬ್ಲಾಕ್ ಹರೇ ಕೃಷ್ಣ ಉದ್ಯಾನದ ಗೇಟ್ ಯಾವಾಗಲು Open ಆಗಿರುತ್ತದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್<br>ಸಹಾಯಕ ಅಭಿಯಂತರು<br>ವಾರ್ಡ್-67 | ವಾರ್ಡ್‌ನ ನಾಗರೀಕರ ದೂರಿಗೆ ಸಂಭಂದಿಸಿದಂತೆ ಸ್ಥಳ ಪರೀಶಿಲಿಸಿ ಕ್ರಮ ವಹಿಸಲಾಗುವುದಾಗಿ ಸಭೆಯಲ್ಲಿ ತಿಳಿಸಿದರು ಹಾಗು ತೋಟಗಾರಿಕೆ ಇಲಾಖೆಯ ಮೇಸ್ತ್ರಿ ರವರಿಗೆ ಕ್ರಮವಹಿಸಲು ಸೂಚಿಸಿದರು. |
| ಎಲ್ಲಾ ವಾರ್ಡ್ ಸಮಿತಿ ಸದಸ್ಯರು,<br>ನಾಗರಿಕರು, ಆರ್.ಡಬ್ಲ್ಯೂ.ಎ | ವಾರ್ಡ್‌ನಲ್ಲಿ ಹಸಿತ್ಯಾಜ್ಯ ಹಾಗು ಒಣ ತ್ಯಾಜ್ಯ ನಿರ್ವಹಣೆ ಮಾಡುವ ಕ್ರಮದ ಬಗ್ಗೆ ಹಾಗು ಮನೆಯಲ್ಲೆ ಹಸಿ ತ್ಯಾಜ್ಯ, ಒಣ ತ್ಯಾಜ್ಯ ವಿಂಗಡಣೆ ಮಾಡುವುದರ ಬಗ್ಗೆ ಮನವೊಲಿಕೆ ಮಾಡಲು ವಾರ್ಡ್ ಸಮಿತಿ ಸದಸ್ಯರು ಹಾಗು ಆರ್.ಡಬ್ಲ್ಯೂ.ಎ ರವರಿಗೆ ತಿಳಿಸಿದರು. |



ಪು.ತಿ.ನೋ.

Scanned by CamScanner

| | |
|---|---|
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ಘನತ್ಯಾಜ್ಯ ನಿರ್ವಹಣೆ ನಿಯಮ 2016ರ ಪ್ರಕಾರ ಕಸವನ್ನು ಮೂಲದಲ್ಲಿಯೇ ವಿಂಗಡಿಸಬೇಕು ಪ್ರತಿ ಮನೆಯಲ್ಲಿಯೂ 3 (ಹಸಿರು, ನೀಲಿ, ಕೆಂಪು) ರೀತಿಯ ಕಸದ ಬುಟ್ಟಿಗಳನ್ನು ಇಟ್ಟಿರಬೇಕು.<br>**ಹಸಿರು ಬುಟ್ಟಿಯಲ್ಲಿ:** ಸೊಪ್ಪು, ತರಕಾರಿ, ಹಣ್ಣುಗಳು ಮತ್ತು ಅಡುಗೆ ವೇಸ್ಟ್ (ಗೊಬ್ಬರ ಮಾಡಬಹುದಾದ ವಸ್ತುಗಳು)<br>**ನೀಲಿ ಬುಟ್ಟಿಯಲ್ಲಿ:** ಕಾಗದಗಳು, ಪ್ಲಾಸ್ಟಿಕ್‌ಗಳು, ಗಾಜುಗಳು, ಎಲೆಕ್ಟ್ರಾನಿಕ್ ವಸ್ತುಗಳು ಹಾಗು ಇತ್ಯಾದಿ. (ಮರುಬಳಕೆ ಮಾಡಬಹುದಾದ ವಸ್ತುಗಳು)<br>**ಕೆಂಪು ಬುಟ್ಟಿಯಲ್ಲಿ:** ಡೈಪರ್‌ಗಳು, ಬ್ಲೇಡುಗಳು,ಪ್ಯಾಡ್‌ಗಳು, ರಾಸಾಯನಿಕ ವಸ್ತುಗಳು,ಮತ್ತು ಇತ್ಯಾದಿ (ಅಪಾಯಕಾರಿ ತ್ಯಾಜ್ಯಗಳು )<br>ಕಸವನ್ನು ಎಲ್ಲೆಂದರಲ್ಲಿ ಬಿಸಾಡಬಾರದು, ಆಟೋಚಾಲಕರು ಮತ್ತು ಸಹಾಯಕರು ಮನೆ ಬಾಗಲಿಗೆ ಬಂದಾಗ ಕಸವನ್ನು ಬೇರ್ಪಡಿಸಿ ನೀಡಬೇಕು, ಪ್ಲಾಸ್ಟಿಕ್‌ನ್ನು ಪೂರ್ಣ ಪ್ರಮಾಣದಲ್ಲಿ ಬಳಸಬಾರದು. ಇದು ಆರೋಗ್ಯಕ್ಕೆ ಹಾನಿಕರಾಕ, ಹಸಿಕಸವನ್ನು ಮನೆಯ ಅಂಗಳದಲ್ಲಿಯೇ ಕಾಂಪೋಸ್ಟಿಂಗ್ ಮಾಡಿ ಗಿಡಗಳಿಗೆ ಹಾಕಬೇಕು ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ. ರಂಗರಾಜು<br>1ನೇ 'ಎನ್'ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘ | ವಾರ್ಡ್‌ನಲ್ಲಿ ಲ್ಯಾಪ್‌ಟಾಪ್ ವಿತರಿಸುವ ಬಗ್ಗೆ ಅರ್ಹ ಫಲಾನುಭವಿಗಳು ಅರ್ಜಿ ಹಾಕಲು ಮಾಹಿತಿ ಪಡೆದುಕೊಂಡರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ವ್ಯಾಪ್ತಿಯಲ್ಲಿ ಹಾಲಿ ಪದವಿ ವ್ಯಾಸಂಗ ಮಾಡುತ್ತಿರುವ ಅರ್ಹ ಫಲಾನುಭವಿಗಳಿಗೆ ಲ್ಯಾಪ್‌ಟಾಪ್ ವಿತರಿಸಲು ರೂ 60.00 ಲಕ್ಷಗಳಷ್ಟು ಅನುದಾನ ಲಭ್ಯವಿದ್ದು ಅಡಳಿತಾತ್ಮಕ ಅನುಮೋದನೆ ಹಾಗು ತಾಂತ್ರಿಕ ಮಂಜುರಾತಿ ದೊರೆತಿದ್ದು ಅದರಂತೆ ಸಮಾಜ ಕಲ್ಯಾಣ ಇಲಾಖೆವತಿಯಿಂದ 121 ಸಂಖ್ಯೆ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿರುತ್ತದೆ. ಈ ವಿಷಯವನ್ನು ವಾರ್ಡ್ ಸಮಿತಿ ಸಭೆಯಲ್ಲಿ ಎಲ್ಲಾ ಸದಸ್ಯರ ಗಮನಕ್ಕೆ ತಂದು ಒಟ್ಟು ಸಂಖ್ಯೆ 121 ಅರ್ಹ ಫಲಾನುಭವಿಗಳಿಗೆ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಗುವುದಾಗಿ ಸಭೆಯಲ್ಲಿ ಮಾಹಿತಿ ಒದಗಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನಲ್ಲಿ ಕಪ್ಪು ಚುಕ್ಕಿ ಪ್ರದೇಶಗಳನ್ನು ಕಣ್ಣಗಾವಲು ಮಾಡಿ ಕಸ ಹಾಕುವವರಿಗೆ ದಂಡ ವಿಧಿಸಲು ಹಾಗು ಸಾರ್ವಜನಿಕರಿಗೆ ಅರಿವು ಮೂಡಿಸಲು ನಿರ್ದೇಶಿಸಲಾಯಿತು ಮುಂದುವರಿಯುತ ಒಣ ತ್ಯಾಜ್ಯ ಸಂಗ್ರಹಕಾರರು ಮನೆ ಮನೆಯಿಂದ ಸಂಗ್ರಹಿಸುವ ಒಣ ತ್ಯಾಜ್ಯವನ್ನು ಅವರ ವತಿಯಿಂದಲೇ ಸಂಸ್ಕರಿಸಿ ನಿರ್ವಹಿಸಲ ಸೂಚಿಸುವುದು ಒಂದು ವೇಳೆ ಅನುಪಯುಕ್ತ ಒಣ ತ್ಯಾಜ್ಯವನ್ನು ರಸ್ತೆಗೆ ಬಿಸಾಡಿದಲ್ಲಿ ಅವರಿಗೆ ದಂಡ ವಿಧಿಸಲು ಸೂಚಿಸಲಾಯಿತು. ಮಾರ್ಷಲ್ ಇಬ್ಬರ ಸಮುಖದಲ್ಲಿ ಇನ್ನು ಹೆಚ್ಚು ನಿಷೇದಿತ ಏಕ ಬಳಕೆ ಪ್ಲಾಸ್ಟಿಕ್ ಬಳಕೆದಾರರ ಅಂಗಡಿಗಳನ್ನು ರೈಡ್ ಮಾಡಿ ದಂಡ ಹಾಕಲು ಸೂಚಿಸಿದರು. |
| ಛಾಯಾಪತಿ<br>(ಪ್ರಭಾರ ವಾರ್ಡ್–44)<br>ಕಿರಿಯ ಆರೋಗ್ಯ ಪರೀವಿಕ್ಷಕರು,<br>ವಾರ್ಡ್–67 | ವಾರ್ಡ್‌ನ ನೋಡೆಲ್ ಅಧಿಕಾರಿಗಳು ಸೂಚಿಸಿರುವಂತೆ ರಸ್ತೆಗೆ ಕಸ ಹಾಕುವವರಿಗೆ ದಂಡ ವಿಧಿಸುವುದು ಹಾಗು ಕಪ್ಪು ಚುಕ್ಕಿ ಪ್ರದೇಶಗಳನ್ನು ಕಣ್ಣಗಾವಲು ಮಾಡಿ ಕಸ ಹಾಕುವವರಿಗೆ ದಂಡ ವಿಧಿಸಲಾಗುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ಸತೀಶ್<br>ವಾರ್ಡ್‌ನ ನಾಗರೀಕರು. | ವಾರ್ಡ್‌ನ 1ನೇ 'ಎ' ಮುಖ್ಯರಸ್ತೆಯಲ್ಲಿ 4 ಇಂಚಿನ ಒಳಚರಂಡಿ ಪೈಪ್ ಇದ್ದು, ಡಾಂಬರಿಕರಣ ಮಾಡುವ ಮುಂಚೆ ಅದನ್ನು ಬದಲಾಯಿಸಿ ಹೊಸ ಒಳಚರಂಡಿ ನೀರಿನ ಪೈಪ್ ಅಳವಡಿಸಲು ತಿಳಿಸಿದರು. |
| ಶ್ರೀ. ನಾಗರಾಜು<br>ಸಹಾಯಕ ಅಭಿಯಂತರರು,<br>ಬೆಂ.ಜ.ಮಂ. ಎನ್.ಡ.ಬ್ಲೂ–1 | ವಾರ್ಡ್‌ನ ನಾಗರೀಕರ ದೂರಿಗೆ ಸಂಭಂದಿಸಿದಂತೆ ಹೊಸ ಒಳಚರಂಡಿ ನೀರಿನ ಪೈಪ್ ಅಳವಡಿಸಲು ಮೇಲಾಧಿಕಾರಿಗಳ ಗಮನಕ್ಕೆ ತಂದು ಒಪ್ಪಿಗೆ ಪಡೆದು ಕ್ರಮವಹಿಸಲಾಗುವುದಾಗಿ ಸಭೆಯಲ್ಲಿ ತಿಳಿಸಿದರು. |



ಪು.ತಿ.ನೋ.

Scanned by CamScanner

| | |
|---|---|
| ಶ್ರೀ. ಸತೀಶ್<br>ವಾರ್ಡ್‌ನ ನಾಗರೀಕರು. | ವಾರ್ಡ್‌ನ ರಾಜಾಜಿನಗರ ಮೆಟ್ರೋ ನಿಲ್ದಾಣದ ಹತ್ತಿರ ಎರಡು ಬದಿಯಲ್ಲಿ ವಾಹನ ನಿಲ್ದಾಣ ಮಾಡುವುದರಿಂದ ಪಾದಚಾರಿಗಳಿಗೆ ಹಾಗು ವಾಹನ ಸವಾರರಿಗೆ ಬಹಳ ತೊಂದರೆ ಉಂಟಾಗುತ್ತಿರುತ್ತದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ನಾಗರೀಕರ ದೂರಿಗೆ ಸಂಭಂದಿಸಿದಂತೆ ರಾಜಾಜಿನಗರ ಸಂಚಾರಿ ಪೊಲೀಸ್ ಠಾಣೆಯವರು ಗೈರು ಹಾಜರಾಗಿರುವುದರಿಂದ ದೂರನ್ನು ತಿಳಿಸುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀಮತಿ. ಗೀತಾ ಕಿನಾಲ್<br>ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ ರಾಜಾಜಿನಗರ 1ನೇ ಬ್ಲಾಕ್ ನ 'ಜಿ' ಹಾಗು 'ಇ' ಮೈನಲ್ಲಿ ರಾತ್ರಿ ವೇಳೆಯಲ್ಲಿ ನಿಂತಿರುವ ವಾಹನಗಳಿಂದ ಪೆಟ್ರೋಲ್ ಕದಿಯುತ್ತಿದ್ದಾರೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ಸುಬ್ರಹ್ಮಣ್ಯನಗರ ಪೊಲೀಸ್ ಠಾಣೆಯವರು ಗೈರು ಹಾಜರಾಗಿರುವುದರಿಂದ ದೂರನ್ನು ತಿಳಿಸುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಉದ್ಯಾನಗಳಲ್ಲಿ ಒಣ ತ್ಯಾಜ್ಯಕ್ಕೆ ಬೆಂಕಿ ಹಾಕುತ್ತಿದ್ದಾರೆ ಇದರ ಬಗ್ಗೆ ಗಮನಹರಿಸಿ ಕ್ರಮವಹಿಸಲು ತೋಟಗಾರಿಕೆ ಇಲಾಖೆಯವರಿಗೆ ತಿಳಿಸಿದರು. |
| ಶ್ರೀ. ರಾಮಚಂದ್ರ<br>1ನೇ 'ಎನ್'ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು. | ವಾರ್ಡ್‌ನ ಗಣೇಶ ದೇವಾಲಯದ ಹಿಂಭಾಗದ ರಸ್ತೆಯಲ್ಲಿ ಜಿಯೋ ಕೇಬಲ್‌ರವರು ಟ್ರೇಂಚ್ ಮಾಡಿದ್ದಾರೆ ಇದರಿಂದ ಸಾರ್ವಜನಿಕರಿಗೆ ಹಾಗು ವಾಹನ ಸವಾರರಿಗೆ ತೊಂದರೆ ಉಂಟಾಗುತ್ತಿದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಮಿತಿ ಸದಸ್ಯರ ದೂರಿಗೆ ಸಂಭಂದಿಸಿದಂತೆ ರಸ್ತೆಯಲ್ಲಿ ಗುಂಡಿ ಬಿದ್ದಲ್ಲಿ ಅದ್ದನ್ನು 3 ದಿನಗಳೊಳಗೆ ಮುಚ್ಚುವುದು ಹಾಗು ಪ್ಯಾಚ್ ವರ್ಕ್ ಮಾಡಿಸಲು ಕ್ರಮವಹಿಸಲು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸೂಚಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್<br>ಸಹಾಯಕ ಅಭಿಯಂತರು<br>ವಾರ್ಡ್–67 | ವಾರ್ಡ್‌ನ ನೋಡೆಲ್ ಅಧಿಕಾರಿಗಳು ಸೂಚಿಸಿರುವಂತೆ ಕ್ರಮವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು. |

ವಾರ್ಡ್ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ದೃಢೀಕೃತ ಮಾಹಿತಿಗಳನ್ನು ತಪ್ಪದೇ ವಾರ್ಡ್ ಕಮಿಟಿ ವಾರ್ಡ್–67 ವಾಟ್ಸ್ ಆಪ್ ಗ್ರೂಪ್ ನಲ್ಲಿ ಮತ್ತು ಪ್ರತಿ ವಾರ್ಡ್ ಸಮಿತಿ ಸಭೆಯಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಲಾಯಿತು. ಸಭೆಯ ಕೊನೆಯಲ್ಲಿ ಸಮಿತಿ ಕಾರ್ಯದರ್ಶಿ ರವರು ಸಮಿತಿ ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

**ಪ್ರತಿಯನ್ನು**

1. ಮಾನ್ಯ ವಲಯ ಉಪಆಯುಕ್ತರು (ಆಡಳಿತ), ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ಕೇಂದ್ರ ರವರ ಅವಗಾಹನ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.



ಪು.ತಿ.ನೋ.

Scanned by CamScanner

8. ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ಪಶ್ಚಿಮ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ
16. ಕಛೇರಿಯ ಕಡತಕ್ಕೆ.

ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು, ವಾರ್ಡ್– 67
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು ಹಾಗೂ
ನೋಡಲ್ ಅಧಿಕಾರಿಗಳು ವಾರ್ಡ್– 67
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned by CamScanner